ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳ ಸಿಬ್ಬಂದಿ ಬಗ್ಗೆ

ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ):-

630(684) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯಾದ್ಯಾಂತ ಇರುವ ಶಾಶ್ವತ ಅನುದಾನ ರಹಿತ ಪ್ರಾಥಮಿಕ, ಮಾಧ್ಯಮಿಕ, ಪ್ರೌಢಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಈ ಶಾಲೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿಗಳಿಗೆ ಆಯಾ ಶಾಲಾ ಆಡಳಿತ ಮಂಡಳಿಗಳು ನೀಡುತ್ತಿರುವ ವೇತನ ಎಷ್ಟು; (ಮಾಹಿತಿ ನೀಡುವುದು)

(ಇ) ಈ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಆಯಾ ಆಡಳಿತ ಮಂಡಳಿಗಳು ನೀಡುತ್ತಿರುವ ವಾರ್ಷಿಕ ವೇತನ ಹಾಗೂ ಇತರೆ ಭತ್ಯೆಗಳ ಮೊತ್ತ ಎಷ್ಟು;

(ಈ) ಶಾಶ್ವತ ಅನುದಾನ ರಹಿತ ಪ್ರಾಥಮಿಕ, ಮಾಧ್ಯಮಿಕ, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಹಾಗೂ ಸರ್ಕಾರಿ ಪ್ರಾಥಮಿಕ, ಮಾಧ್ಯಮಿಕ, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಉ) ಕೊರೋನಾ ಸಂದರ್ಭದಲ್ಲಿ ಸಂಕಷ್ಟಕ್ಕೊಳ್ಳಗಾಗಿರುವ ಅನುದಾನ ರಹಿತ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು?